**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, 6ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560003**

ಸಂಖ್ಯೆ:ಎ8/ಮಾರ್ಚ್20/ಪ್ರ.ಪ.ಸು/39/2019-20 ದಿನಾಂಕ:09.03.2020

**:: ಸುತ್ತೋಲೆ ::**

ವಿಷಯ:- ಮಾರ್ಚ್/ಏಪ್ರಿಲ್ 2020ರ ಮಾಹೆಯಲ್ಲಿ ನಡೆಯುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಮಧುಮೇಹ-1 ರಿಂದ ಬಳಲುತ್ತಿರುವ ವಿದ್ಯಾರ್ಥಿಗಳು ಇನ್ಸುಲಿನ್ ನಂತಹ ವೈದ್ಯಕೀಯ ಸಲಕರಣೆಯನ್ನು ಪರೀಕ್ಷಾ ಕೇಂದ್ರಕ್ಕೆ ತೆಗೆದುಕೊಂಡು ಹೋಗಲು ಮತ್ತು ಶ್ರವಣದೋಷವುಳ್ಳ ಮಕ್ಕಳಿಗೆ ಪರೀಕ್ಷೆ ಕೊಠಡಿಯಲ್ಲಿ ಸಂಜ್ಞಾ ಭಾಷೆಯನ್ನು (Sign Language) ಅರಿತ ವಿಷಯ ಶಿಕ್ಷಕರಲ್ಲದ ವಿಶೇಷ ಶಿಕ್ಷಕರನ್ನು ನಿಯೋಜಿಸಲು ಅನುಮತಿಸುವ ಬಗ್ಗೆ.

ಉಲ್ಲೇಖ:- ಪತ್ರಾಂಕಿತ ಅಧೀಕ್ಷಕರ ಕಾರ್ಯಾಲಯ, ಕಿವುಡ ಮಕ್ಕಳ ಸರ್ಕಾರಿ ಶಾಲೆ, ವಿದ್ಯಾಗಿರಿ, ಬೆಳಗಾವಿ ರವರ ಪತ್ರದ ದಿನಾಂಕ:03.02.2020.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಾರ್ಚ್/ಏಪ್ರಿಲ್ 2020ರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ದಿನಾಂಕ:27.03.2020 ರಿಂದ 09.04.2020ರವರೆಗೆ ರಾಜ್ಯಾದ್ಯಂತ ಪರೀಕ್ಷಾ ಕೇಂದ್ರಗಳಲ್ಲಿ ನಡೆಯಲಿದೆ. ಎಸ್.ಎಸ್.ಎಲ್.ಸಿ ವ್ಯಾಸಂಗ ಮಾಡುತ್ತಿರುವ ಕೆಲವು ವಿದ್ಯಾರ್ಥಿಗಳು ಮಧುಮೇಹ-1 ರಿಂದ ಬಳಲುತ್ತಿದ್ದು, ಈ ಸಂಬಂಧ ಅಂತಹ ವಿದ್ಯಾರ್ಥಿಗಳಿಗೆ ಸಕ್ಕರೆ ಅಂಶ ನಿಯಂತ್ರಿಸುವ ಇನ್ಸುಲಿನ್ ಪಂಪ್ ಸೇರಿದಂತೆ ಮಾತ್ರೆಯನ್ನು ಸಹ ಪರೀಕ್ಷಾ ಕೇಂದ್ರಕ್ಕೆ ತೆಗೆದುಕೊಂಡು ಹೋಗಲು ಅನುಮತಿ ನೀಡಬೇಕೆಂದು ದೂರವಾಣಿಯ ಮುಖಾಂತ ಕೆಲವು ವಿದ್ಯಾರ್ಥಿಗಳ ಪೋಷಕರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಇಂತಹ ಖಾಯಿಲೆಯಿಂದ ಬಳಲುತ್ತಿರುವ ವಿದ್ಯಾರ್ಥಿಗಳು ಸಕ್ಕರೆ ಅಂಶ ನಿಯಂತ್ರಿಸುವ ಇನ್ಸುಲಿನ್ ಪಂಪ್ ಸೇರಿದಂತೆ ಮಾತ್ರೆಯನ್ನು ಸಹ ಪರೀಕ್ಷಾ ಕೇಂದ್ರಕ್ಕೆ ತೆಗೆದುಕೊಂಡು ಹೋಗಲು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರನ್ನು ಅನುಮತಿ ಕೋರಿದ್ದಲ್ಲಿ, ಅವರ ಮನವಿ ಸ್ವೀಕರಿಸಿ, ವೈದ್ಯರ ಸಲಹಾ ಪತ್ರವನ್ನು ಪರಿಶೀಲಿಸಿಕೊಂಡು, ಮಧುಮೇಹ ಖಾಯಿಲೆ ಇರುವುದನ್ನು ಖಚಿತಪಡಿಸಿಕೊಂಡು ನಂತರ ಅವಕಾಶ ಕಲ್ಪಿಸಲು ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರಿಗೆ ತಿಳಿಸಿದೆ.

ಹಾಗೂ ಶ್ರವಣದೋಷವುಳ್ಳ ಮಕ್ಕಳಿಗೆ ಪರೀಕ್ಷಾ ಕೊಠಡಿಯಲ್ಲಿ ಉಂಟಾಗುವ ಸಂದೇಹ / ಗೊಂದಲಗಳಿಗೆ ಸ್ಪಂದಿಸಲು ಸಂಜ್ಞಾ ಭಾಷೆಯನ್ನು (Sign Language) ಅರಿತ, ಸದರಿ ವಿಷಯದ ಶಿಕ್ಷಕರಲ್ಲದ ವಿಶೇಷ ಶಿಕ್ಷಕರನ್ನು ನಿಯೋಜಿಸಲು ಪ್ರಸ್ತುತ ಸಾಲಿನಿಂದ ಅವಕಾಶ ಕಲ್ಪಿಸಲಾಗಿದೆ. ಈ ಸಂಬಂಧ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ವಿದ್ಯಾರ್ಥಿಯ ಪ್ರವೇಶ ಪತ್ರ ಮತ್ತು ವೈದ್ಯಕೀಯ ಪ್ರಮಾಣ ಪತ್ರವನ್ನು ಪರಿಶೀಲಿಸಿ, ವಿದ್ಯಾರ್ಥಿಯು ಶ್ರವಣದೋಷದಿಂದ ಬಳಲುತ್ತಿರುವುದನ್ನು ಖಚಿತಪಡಿಸಿಕೊಂಡು ಸಂಜ್ಞಾ ಭಾಷೆಯನ್ನು ಅರಿತ, ಸದರಿ ವಿಷಯ ಶಿಕ್ಷಕರಲ್ಲದ ವಿಶೇಷ ಶಿಕ್ಷಕರನ್ನು ಲಭ್ಯತೆಯನುಸಾರ ನಿಯೋಜಿಸಲು ಕ್ರಮವಹಿಸುವುದು.

ಇದರ ಬಗ್ಗೆ ಎಲ್ಲಾ ಉಪ ನಿರ್ದೇಶಕರು (ಆಡಳಿತ) ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಬರುವ ಪ್ರೌಢ ಶಾಲೆಗಳಲ್ಲಿನ ಶಾಲಾ ಮುಖ್ಯೋಪಾಧ್ಯಾಯರ ಮುಖಾಂತರ ಅಂತಹ ಸಮಸ್ಯೆಯಿಂದ ಬಳಲುತ್ತಿರುವ ಎಸ್.ಎಸ್.ಎಲ್.ಸಿ ಪರೀಕ್ಷೆ ತೆಗೆದುಕೊಳ್ಳುವ ವಿದ್ಯಾರ್ಥಿಗಳ ಗಮನಕ್ಕೆ ತಂದು ಇದರ ಸದುಪಯೋಗ ಪಡೆದುಕೊಳ್ಳಲು ಸೂಚಿಸಲು ತಿಳಿಸಿದೆ. ಹಾಗೂ ಈ ಬಗ್ಗೆ ಸ್ಥಳೀಯವಾಗಿ ವ್ಯಾಪಕ ಪ್ರಚಾರ ನೀಡಲು ತಿಳಿಸಿದೆ.

20/3/20

(ಡಾ|| ಕೆ.ಜಿ. ಜಗದೀಶ)
ಆಯುಕ್ತರು, ಸಾ.ಶಿ.ಇ
ಹಾಗೂ ಅಧ್ಯಕ್ಷರು ಕ.ಪ್ರೌ.ಶಿ.ಪ.ಮಂಡಳಿ.

10/3

**ಗೆ,**

1. ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು(ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ಜಿಲ್ಲಾ ಉಪ ನಿರ್ದೇಶಕರು(ಆಡಳಿತ)ರವರ ಮುಖಾಂತರ ಎಲ್ಲಾ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ಇವರ ಮುಂದಿನ ಸೂಕ್ತ ಕ್ರಮಕ್ಕಾಗಿ.
4. ತಾಲ್ಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖಾಂತರ ಎಲ್ಲಾ ಪ್ರೌಢ ಶಾಲೆಗಳ ಮುಖ್ಯ ಶಿಕ್ಷಕರುಗಳಿಗೆ ಅಗತ್ಯ ಕ್ರಮಕ್ಕಾಗಿ.
5. ಕಛೇರಿ ಪತ್ರಿ.

A8_letter1